# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 330 |
| ಸದಸ್ಯರ ಹೆಸರು | : | ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 07-07-2023 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೀದರ್ ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ಕೃಷಿಕರಿಗೆ ನೀಡಲಾಗುತ್ತಿರುವ ರಿಯಾಯಿತಿಗಳಾವುವು: ಈ ರಿಯಾಯಿತಿಗಳನ್ನು ಕೃಷಿಕರಿಗೆ ವಿತರಿಸಲು ಇರುವ ಮಾನದಂಡಗಳೇನು: (ಕಳೆದ ಮೂರು ವರ್ಷಗಳಲ್ಲಿ ತಾಲ್ಲೂಕುವಾರು ರಿಯಾಯಿತಿಯನ್ನು ಪಡೆದ ರೈತರ ವಿಳಾಸ ಮತ್ತು ಫಲಾನುಭವಿಗಳ ಸಂಪೂರ್ಣ ಮಾಹಿತಿ ಒದಗಿಸುವುದು:</td><td>ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ಕೃಷಿಕರಿಗೆ ನೀಡಲಾಗುತ್ತಿರುವ ರಿಯಾಯಿತಿಗಳು ಹಾಗೂ ಈ ರಿಯಾಯಿತಿಗಳನ್ನು ಕೃಷಿಕರಿಗೆ ವಿತರಿಸಲು ಇರುವ ಮಾನದಂಡಗಳ ವಿವರಗಳನ್ನು ಅನುಬಂಧ 1ರಲ್ಲಿ ಒದಗಿಸಲಾಗಿದೆ. ತಾಲ್ಲೂಕುವಾರು ರಿಯಾಯಿತಿಯನ್ನು ಪಡೆದ ರೈತರ ವಿಳಾಸ ಮತ್ತು ಫಲಾನುಭವಿಗಳ ಸಂಪೂರ್ಣ ಮಾಹಿತಿಯನ್ನು ಸಿಡಿ ರೂಪದಲ್ಲಿ ಒದಗಿಸಲಾಗಿದೆ.</td></tr>
<tr><td>ಆ)</td><td>ಬೀದರ್ ಜಿಲ್ಲೆಯಲ್ಲಿ ಕೃಷಿ ಚಟುವಟಿಕೆಗಳಲ್ಲಿ ನೀರಿನ ಸಾಮರ್ಥ್ಯ ಬಳಕೆಯನ್ನು ಉತ್ತೇಜಿಸುವ ಸಲುವಾಗಿ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ, ಹನಿ ಮತ್ತು ತುಂತುರು ನೀರಾವರಿ ಕೃಷಿ ಹೊಂಡ ಘಟಕಗಳಿಗೆ ಕಳೆದ 3 ವರ್ಷಗಳಲ್ಲಿ ವಿತರಿಸಿದ ಸಹಾಯಧನವೆಷ್ಟು: (ವಿತರಿಸಿದಲ್ಲಿ ಫಲಾನುಭವಿಗಳ ವಿಳಾಸದೊಂದಿಗೆ ತಾಲ್ಲೂಕುವಾರು ಮಾಹಿತಿ ಒದಗಿಸುವುದು)</td><td>ಬೀದರ್ ಜಿಲ್ಲೆಯಲ್ಲಿ ಕೃಷಿ ಚಟುವಟಿಕೆಗಳಲ್ಲಿ ನೀರಿನ ಸಮರ್ಥ ಬಳಕೆಯನ್ನು ಉತ್ತೇಜಿಸುವ ಸಲುವಾಗಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯನ್ನು (ಮುಖ್ಯ ಮಂತ್ರಿಗಳ ಸೂಕ್ಷ್ಮ ನೀರಾವರಿ ಯೋಜನೆ) ಹಮ್ಮಿಕೊಳ್ಳಲಾಗಿದೆ. ಹನಿ ಮತ್ತು ತುಂತುರು ನೀರಾವರಿ ಘಟಕಗಳಿಗೆ ಕಳೆದ ಮೂರು ವರ್ಷಗಳಲ್ಲಿ ವಿತರಿಸಿದ ಸಹಾಯಧನದ ವಿವರ ಈ ಕೆಳಗಿನಂತಿವೆ;<br>(ಸಹಾಯಧನ: ರೂ.ಲಕ್ಷಗಳಲ್ಲಿ)
<table>
<tr><th>ಕ್ರ. ಸಂ.</th><th>ವರ್ಷ</th><th>ವಿತರಿಸಿದ ಸಹಾಯಧನ</th></tr>
<tr><td>1</td><td>2020-21</td><td>2457.56</td></tr>
<tr><td>2</td><td>2021-22</td><td>1355.15</td></tr>
<tr><td>3</td><td>2022-23</td><td>1110.82</td></tr>
<tr><td></td><td>ಒಟ್ಟು</td><td>4923.53</td></tr>
</table>
ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿತರಿಸಿದ ಹನಿ ಮತ್ತು ತುಂತುರು ನೀರಾವರಿ ಘಟಕಗಳ ಫಲಾನುಭವಿಗಳ ತಾಲ್ಲೂಕುವಾರು ಮಾಹಿತಿಯನ್ನು ಸಿ.ಡಿ.ಯಲ್ಲಿ ಲಗತ್ತಿಸಿ ಒದಗಿಸಲಾಗಿದೆ.<br>ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಕೃಷಿ ಚಟುವಟಿಕೆಗಳಲ್ಲಿ ನೀರಿನ ಸಾಮರ್ಥ್ಯ ಬಳಕೆಯನ್ನು ಉತ್ತೇಜಿಸುವ ಸಲುವಾಗಿ ಜಲಾನಯನ ಅಭಿವೃದ್ಧಿ ಇಲಾಖೆ ವತಿಯಿಂದ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಇತರೆ ಉಪಚಾರಗಳು(PMKSY-OI) ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ಸದರಿ ಯೋಜನೆಯ ಫಲಾನುಭವಿಗಳ ವಿವರಗಳನ್ನು ಅನುಬಂಧ-2 ರಲ್ಲಿ ಒದಗಿಸಲಾಗಿದೆ.</td></tr>
</table>

<table>
<tr>
<td>ಇ)</td>
<td>ಬೀದರ್ ಜಿಲ್ಲೆಯಲ್ಲಿ ರೈತರ ಮಕ್ಕಳ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಲು ಮುಖ್ಯಮಂತ್ರಿ ರೈತ ವಿದ್ಯಾನಿಧಿ ಕಾರ್ಯಕ್ರಮ ಘೋಷಿಸಲಾಗಿದೆಯೇ ಹಾಗಿದ್ದಲ್ಲಿ, ಘೋಷಿಸಿರುವ ದಿನಾಂಕದಿಂದ ಜೂನ್ ತಿಂಗಳವರೆಗೆ ಎಷ್ಟು ರೈತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನವನ್ನು ವಿತರಿಸಲಾಗಿದೆ: (ವಿತರಿಸಿದ್ದಲ್ಲಿ ರೈತ ವಿದ್ಯಾರ್ಥಿಗಳೊಂದಿಗೆ ಸಂಪೂರ್ಣ ವಿಳಾಸದೊಂದಿಗೆ ತಾಲ್ಲೂಕುವಾರು ಸ್ಪಷ್ಟ ಮಾಹಿತಿ ಒದಗಿಸುವುದು)</td>
<td>ರಾಜ್ಯದ ಕೃಷಿಕರ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ, 2021-22 ನೇ ಸಾಲಿನ ಆರ್ಥಿಕ ವರ್ಷದಿಂದ ಮುಖ್ಯಮಂತ್ರಿ ರೈತ ವಿದ್ಯಾನಿಧಿ ಕಾರ್ಯಕ್ರಮವನ್ನು ಸರ್ಕಾರದ ಆದೇಶದ ಸಂಖ್ಯೆ:AGRI-AML/141/2021, ದಿನಾಂಕ:07.08.2021, 10.12.2021 ಮತ್ತು 31.12.2021ರನ್ವಯ ಜಾರಿಗೊಳಿಸಲಾಗುತ್ತಿದೆ.<br>
ಸರ್ಕಾರದ ಆದೇಶ ಸಂ:AGRI-AML/141/2021 ದಿ:30.08.2022 ರನ್ವಯ 2022-23 ನೇ ಶೈಕ್ಷಣಿಕ ಸಾಲಿನಿಂದ ಭೂ ರಹಿತ ಕೃಷಿ ಕಾರ್ಮಿಕರ ಮಕ್ಕಳಿಗೆ ಹೆಚ್ಚಿನ ಪ್ರೋತ್ಸಾಹ ನೀಡುವ ಉದ್ದೇಶದಿಂದ ಮುಖ್ಯಮಂತ್ರಿ ರೈತ ವಿದ್ಯಾನಿಧಿ ಕಾರ್ಯಕ್ರಮವನ್ನು ವಿಸ್ತರಿಸಿ ಆದೇಶ ಹೊರಡಿಸಲಾಗಿರುತ್ತದೆ.<br>
ಬೀದರ್ ಜಿಲ್ಲೆಯ ವಿದ್ಯಾರ್ಥಿ ವೇತನದ ಪ್ರಗತಿ ವಿವರ:-
<table>
<tr><th>ಕ್ರ ಸಂ</th><th>ಕಾರ್ಯಕ್ರಮ</th><th>ಶೈಕ್ಷಣಿಕ ಸಾಲು</th><th>ವಿದ್ಯಾರ್ಥಿ ಗಳ ಸಂಖ್ಯೆ</th><th>ವಿದ್ಯಾರ್ಥಿ ವೇತನ ಪಾವತಿ (ಲಕ್ಷ ಗಳಲ್ಲಿ)</th></tr>
<tr><td>1</td><td rowspan="2">ಮುಖ್ಯಮಂತ್ರಿರೈತ ವಿದ್ಯಾನಿಧಿ</td><td>2021-22</td><td>29,609</td><td>1286.83</td></tr>
<tr><td>2</td><td>2022-23</td><td>23,792</td><td>940.93</td></tr>
<tr><td>3</td><td>ಭೂರಹಿತ ಕೃಷಿ ಕಾರ್ಮಿಕರ ವಿದ್ಯಾನಿಧಿ</td><td>2022-23</td><td>1,583</td><td>47.615</td></tr>
<tr><td colspan="3">ಒಟ್ಟು</td><td>54,984</td><td>2275.375</td></tr>
</table>
ತಾಲ್ಲೂಕುವಾರು ಮಾಹಿತಿ ಅನುಬಂಧ-3ರಲ್ಲಿ ಒದಗಿಸಲಾಗಿದೆ.<br>
ರೈತ ವಿದ್ಯಾರ್ಥಿಗಳ ಮಾಹಿತಿಯನ್ನು ಸಿಡಿಯಲ್ಲಿ ಒದಗಿಸಲಾಗಿದೆ.</td>
</tr>
<tr>
<td>ಈ)</td>
<td>ಬೀದರ್ ಜಿಲ್ಲೆಯಲ್ಲಿ ಕೃಷಿ ಅಧಿಕಾರಿಗಳು ಕೃಷಿಕರಿಗೆ ಕೃಷಿ ಚಟುವಟಿಗಳ ಬಗ್ಗೆ ಸರಿಯಾದ ಮಾಹಿತಿ ನೀಡದಿರುವುದರಿಂದ ರೈತರಿಗೆ ತೊಂದರೆ ಉಂಟುಮಾಡುತ್ತಿರುವ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು? (ಮಾಹಿತಿ ಒದಗಿಸುವುದು)</td>
<td>ಬೀದರ್ ಜಿಲ್ಲೆಯಲ್ಲಿ ಕೃಷಿ ಅಧಿಕಾರಿಗಳು ಕೃಷಿಕರಿಗೆ ಕೃಷಿ ಚಟುವಟಿಕೆಗಳ ಬಗ್ಗೆ ಸರಿಯಾದ ಮಾಹಿತಿ ನೀಡದಿರುವ ಕುರಿತು ದೂರು ಅರ್ಜಿಗಳು ಸ್ವೀಕೃತವಾಗಿರುವುದಿಲ್ಲ.</td>
</tr>
</table>

**ಸಂಖ್ಯೆ: AGRI/67/ASC/2023**

13/9

**(ಎನ್. ಚಲುವರಾಯ ಸ್ವಾಮಿ)**

ಕೃಷಿ ಸಚಿವರು.